ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/ಶೈವಿ/27/ಅಕಾನಿ-ಮಂಜೂರು/2021-22

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಶೇಷಾದ್ರಿ ರಸ್ತೆ, ಬೆಂಗಳೂರು-560001.
ದಿನಾಂಕ : 20.05.2022.

**ಅಧಿಕೃತ ಜ್ಞಾಪನ**

ವಿಷಯ : ಮಂಗಳೂರು ವಿಶ್ವವಿದ್ಯಾಲಯದ ದೈಹಿಕ ಶಿಕ್ಷಣ ವಿಭಾಗದಲ್ಲಿ ನಡೆಯುವ ಕ್ರೀಡಾ ವಿಜ್ಞಾನ ಕಾರ್ಯಗಾರಕ್ಕೆ ಪದವಿ ಕಾಲೇಜುಗಳ ದೈಹಿಕ ಶಿಕ್ಷಣ ನಿರ್ದೇಶಕರುಗಳು ಭಾಗವಹಿಸುವ ಬಗ್ಗೆ.

ಉಲ್ಲೇಖ : ನಿರ್ದೇಶಕರು, ದೈಹಿಕ ಶಿಕ್ಷಣ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ, ಇವರ ಪತ್ರಸಂಖ್ಯೆ : ಮಂ.ವಿ/ಡಿಪಿಇ/62/2022-23, ದಿನಾಂಕ : 04.05.2022.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿ ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳೂರು ಇಲ್ಲಿನ ದೈಹಿಕ ಶಿಕ್ಷಣ ವಿಭಾಗದ ಒಳಾಂಗಣ ಕ್ರೀಡಾಂಗಣದಲ್ಲಿ ದಿನಾಂಕ : 23.05.2022 ರಿಂದ 28.05.2022 ರವರೆಗೆ 6 ದಿನಗಳ ಕ್ರೀಡಾ ವಿಜ್ಞಾನ ಕಾರ್ಯಗಾರವನ್ನು ಆಯೋಜಿಸಲಾಗಿದ್ದು, ಸದರಿ ಕಾರ್ಯಗಾರದಲ್ಲಿ ರಾಜ್ಯದ ಪದವಿ ಕಾಲೇಜುಗಳ ದೈಹಿಕ ಶಿಕ್ಷಣ ನಿರ್ದೇಶಕರುಗಳು ಭಾಗವಹಿಸಲು ನಿಯೋಜಿಸುವಂತೆ ಕೋರಿರುತ್ತಾರೆ.

ಈ ಸಂಬಂಧ, ಕೆಲವು ವಿಶ್ವವಿದ್ಯಾಲಯಗಳ ವ್ಯಾಪ್ತಿಗೊಳಪಡುವ ಕೆಲವು ಪದವಿ ಕಾಲೇಜುಗಳಲ್ಲಿ ಸೆಮಿಸ್ಟರ್‌ವಾರು ಪದವಿ ಪರೀಕ್ಷೆಗಳು ನಡೆಯುತ್ತಿದ್ದು, ಪರೀಕ್ಷಾ ಕಾರ್ಯಕ್ಕೆ ಹಾಗೂ ಕಾಲೇಜಿನ ದೈನಂದಿನ ಕೆಲಸ ಕಾರ್ಯಕ್ಕೆ ಅಡಚಣೆಯಾಗದಂತೆ ದಿನಾಂಕ : 23.05.2022 ರಿಂದ 28.05.2022 ರವರೆಗೆ 6 ದಿನಗಳ ನಡೆಯುವ ಕ್ರೀಡಾ ವಿಜ್ಞಾನ ಕಾರ್ಯಗಾರಕ್ಕೆ ಪದವಿ ಕಾಲೇಜುಗಳ ದೈಹಿಕ ಶಿಕ್ಷಣ ನಿರ್ದೇಶಕರುಗಳನ್ನು ನಿಯೋಜಿಸಲು ಪ್ರಾಂಶುಪಾಲರ ಹಂತದಲ್ಲೇ ನಿಯಮಾನುಸಾರ ಅಗತ್ಯ ಕ್ರಮವಹಿಸುವಂತೆ ಸೂಚಿಸಲಾಗಿದೆ ಹಾಗೂ ಕಾರ್ಯಗಾರದಲ್ಲಿ ಭಾಗವಹಿಸುವ ದೈಹಿಕ ಶಿಕ್ಷಣ ಬೋಧಕರಿಗೆ ಸರ್ಕಾರ/ಇಲಾಖೆಗೆ ಆರ್ಥಿಕ ಹೊರೆಯಾಗದಂತೆ ಭಾಗವಹಿಸಿ, ಹಾಜರಾತಿ ಪತ್ರವನ್ನು ಮೇಲಾಧಿಕಾರಿಗಳಿಗೆ ಸಲ್ಲಿಸುವ ನಿಬಂಧನೆಗೊಳಪಟ್ಟು ಅನ್ಯಕಾರ್ಯ ನಿಮಿತ್ತ ರಜೆಯನ್ನು ಮಂಜೂರು ಮಾಡಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

**ಇವರಿಗೆ :**

1) ಎಲ್ಲಾ ಸರ್ಕಾರಿ ಹಾಗೂ ಅನುದಾನಿತ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.

**ಪ್ರತಿಯನ್ನು :**

1) ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಮಂಗಳೂರು, ಶಿವಮೊಗ್ಗ, ಧಾರವಾಡ, ಕಲಬುರಗಿ. (ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ)
2) ನಿರ್ದೇಶಕರು, ದೈಹಿಕ ಶಿಕ್ಷಣ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ, ದ.ಕ ಜಿಲ್ಲೆ - 574199. (ಮಾಹಿತಿಗಾಗಿ)
3) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು.
4) ಕಛೇರಿ ಪ್ರತಿ.